ಆ) ಸದರಿ ಪ್ರಕ್ರಿಯೆ ಯಾವ ಹಂತದಲ್ಲಿದೆ;

ಇ) ಸದರಿ ಕಾಲೇಜು ಕಟ್ಟಡವನ್ನು ಇಲಾಖೆಯು ಸ್ವಾಧೀನಕ್ಕೆ ಯಾವಾಗ ತೆಗೆದುಕೊಳ್ಳಲಾಗುವುದು?

ಶ್ರೀ ಡಿ. ಮಂಜುನಾಥ (ಉನ್ನತ ಶಿಕ್ಷಣ ಸಚಿವರು) :

ಅ),ಆ) ಕಟ್ಟಡದ ಒಟ್ಟು ಮೌಲ್ಯ ರೂ.70,34,465–00 ಪೈಕಿ ಸದರಿ ಕಟ್ಟಡವನ್ನು ಕಾಲೇಜಿಗೆ ಪಡೆಯಲು ಮೊದಲಿಗೆ ರೂ.19.89 ಲಕ್ಷಗಳನ್ನು ಭಾಗಶಃ ಪಾವತಿಸಲಾಗಿದೆ.

ಇ) ಒಟ್ಟು ಮೌಲ್ಯದಲ್ಲಿ ಈಗಾಗಲೇ ಪಾವತಿಸಿರುವ ರೂ.19.89 ಲಕ್ಷಗಳನ್ನು ಹೊರತುಪಡಿಸಿ ಬಾಕಿ ಹಣವನ್ನು ಪಾವತಿಸಲು ಅನುದಾನ ದೊರಕಿಸಿಕೊಳ್ಳಲು ಪ್ರಯತ್ನಿಸಲಾಗುತ್ತಿದೆ. ಅನುದಾನ ದೊರಕಿಸಿಕೊಂಡ ಕೂಡಲೇ ಇಲಾಖೆಯ ಸ್ವಾಧೀನಕ್ಕೆ ತೆಗೆದುಕೊಳ್ಳಲಾಗುವುದು.

518(505) ಶ್ರೀ ಹೆಚ್.ಎಸ್. ಶಂಕರಲಿಂಗೇಗೌಡ (ಚಾಮರಾಜ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಮೈಸೂರು ವಿಶ್ವವಿದ್ಯಾನಿಲಯದ ನೌಕರ ವಸತಿ ಗೃಹಗಳನ್ನು ಹೊಂದಿರುವ ಮಾನಸ ಗಂಗೋತ್ರಿ ರಸ್ತೆಗಳ ಡಾಂಬರೀಕರಣಕ್ಕೆ ತಗಲುವ ವೆಚ್ಚವೆಷ್ಟು; (ವಿವರ ನೀಡುವುದು);

ಆ) ಈ ವೆಚ್ಚವನ್ನು ಸರ್ಕಾರದಿಂದ ಭರಿಸಿ ರಸ್ತೆಗಳ ಡಾಂಬರೀಕರಣ ಮಾಡುವ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :

ಅ) ರೂ.10.00 ಲಕ್ಷ

ಆ) ಮೈಸೂರು ವಿಶ್ವವಿದ್ಯಾಲಯಕ್ಕೆ ಮಂಜೂರು ಮಾಡಿರುವ ಅಭಿವೃದ್ಧಿ ಅನುದಾನದಿಂದ ಡಾಂಬರೀಕರಣಗೊಳಿಸಬೇಕಾಗುತ್ತದೆ.

519(445) ಶ್ರೀ ಶಿವಾನಂದ ನಾಯಕ್ (ಭಟ್ಕಳ) : ಮಾನ್ಯ ಧರ್ಮಸಿಂಗ್ ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಕೃಷಿ ಮೇಲಿನ ಬಡ್ಡಿ ಮನ್ನಾ ಮಾಡುವ ವಿಚಾರ ಸರ್ಕಾರದ ಮುಂದೆ ಇದೆಯೇ?

ಆ) ಕೃಷಿ ಸಾಲಕ್ಕಾಗಿ ಸ್ಟಾಂಪ್ ಡ್ಯೂಟಿ ಪ್ರಾರಂಭಿಸಿರುವುದನ್ನು ಸರ್ಕಾರ ಹಿಂತೆಗೆದುಕೊಳ್ಳುವುದೇ?

3) ರೈತರಿಗೆ ಬೆಳೆ ವಿಮೆ ಯೋಜನೆಯನ್ನು ಮುಂದುವರಿಸಲಾಗುವುದೆ?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ಸದ್ಯಕ್ಕೆ ಕೃಷಿ ಸಾಲಗಳ ಮೇಲಿನ ಬಡ್ಡಿಯನ್ನು ಮನ್ನಾ ಮಾಡುವ ವಿಚಾರವು ಸರ್ಕಾರದ ಮುಂದೆ ಇರುವುದಿಲ್ಲ.

ಆ) ಕೃಷಿ ಸಾಲಕ್ಕಾಗಿ ಮಾಡಲಾಗುವ ಅಡಮಾನ ಪತ್ರಕ್ಕೆ ಶೇಕಡಾ 0.5ರಷ್ಟು ಮುದ್ರಾಂಕ ಶುಲ್ಕ ವಿಧಿಸಲಾಗುತ್ತಿದೆ. ಸದರಿ ಶುಲ್ಕವನ್ನು ಹಿಂತೆಗೆದುಕೊಳ್ಳುವ ಪ್ರಸ್ತಾವವು ಸರ್ಕಾರದ ಪರಿಶೀಲನೆಯಲ್ಲಿ ಇರುತ್ತದೆ. ಇನ್ನೂ ಅಂತಿಮ ತೀರ್ಮಾನ ಕೈಗೊಂಡಿರುವುದಿಲ್ಲ.

ಇ) ಹೌದು.

521(334) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?